ಶ್ರೀ ಮಲ್ಲಿಕಾರ್ಜುನ ಖರ್ಗೆ: ಕಾಲೇಜ್ ಮಾಡುವ ಉದ್ದೇಶವೇನು? ಇಲ್ಲಿನ ಮಕ್ಕಳಿಗೆ ಅವಕಾಶ ಮಾಡಿಕೊಡಬೇಕು ಎಂದು ತಾನೇ. ಅದೇ ಇರಲಿಲ್ಲ ಅಂದರೆ ಹೇಗೆ.

ಆ) ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಡಿ.ಮಂಜುನಾಥ್ (ಅರಣ್ಯ ಸಚಿವರು): ಅಧ್ಯಕ್ಷರೇ 21ನೇ ಪಟ್ಟಿಯಲ್ಲಿನ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಪಟ್ಟಿಯಲ್ಲಿರುವ 86 ಪ್ರಶ್ನೆಗಳ ಪೈಕಿ 76 ಪ್ರಶ್ನೆಗಳಿಗೆ ಉತ್ತರವನ್ನು ಸದನದ ಮುಂದೆ ಮಂಡಿಸುತ್ತಿದ್ದೇನೆ.

ತೀರ್ಥಹಳ್ಳಿ ತಾಲ್ಲೂಕು ಪಂಚಾಯಿತಿಯಲ್ಲಿನ ಅವ್ಯವಹಾರಗಳ ಕುರಿತು.

1392 (2069)

ಶ್ರೀ ಅರಗಜ್ಞಾನೇಂದ್ರ (ತೀರ್ಥಹಳ್ಳಿ): ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತೀರ್ಥಹಳ್ಳಿ ತಾಲ್ಲೂಕು ಪಂಚಾಯತಿ ಕಚೇರಿಯಿಂದ 1992ರಿಂದ 1994ರ ಅವಧಿಯಲ್ಲಿ ಮಾಡಲಾದ ದಶಲಕ್ಷಬಾವಿ, ಕಟ್ಟಡ, ವಸತಿ ಯೋಜನೆ ಕಾಮಗಾರಿಗಳಲ್ಲಿ ಹಣ ದುರುಪಯೋಗವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ವಿಚಾರಣೆ ಏನಾದರೂ ನಡೆಯುತ್ತಿದೆಯೆ; ಹಾಗಿದ್ದಲ್ಲಿ ಎಂದಿನಿಂದ ನಡೆಯುತ್ತಿದೆ

ಇ) ಆ ಬಗ್ಗೆ ಇದುವರೆಗೆ ಯಾರಿಂದಲಾದರೂ ಹಣ ವಸೂಲು ಮಾಡಲಾಗಿದೆಯೇ; ಅಥವ ಕಾನೂನು ಕ್ರಮ ಜರುಗಿಸಲಾಗಿದೆಯೆ; ಹಾಗಿಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು.

ಈ) ತಪ್ಪಿತಸ್ಥ ಅಧಿಕಾರಿ/ಸಿಬ್ಬಂದಿ ಮೇಲೆ ಕ್ರಮ ಕೈಗೊಳ್ಳಲು ಆಗುತ್ತಿರುವ ವಿಳಂಬಕ್ಕೆ ಕಾರಣಗಳೇನು?

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) ಬಂದಿದೆ.

ಆ) ಹೌದು. 1995ರಿಂದ ವಿಚಾರಣೆ ನಡೆಯುತ್ತಿದೆ.

ಇ) ಇಲ್ಲ. ಒಬ್ಬ ಅಧಿಕಾರಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆಯನ್ನು ಅಂತಿಮಗೊಳಿಸಿ ವೇತನ ಬಡ್ತಿಯನ್ನು ತಡೆಹಿಡಿಯುವ ದಂಡನೆಯನ್ನು ವಿಧಿಸಲಾಗಿದೆ. ಮತ್ತೊಬ್ಬ ಅಧಿಕಾರಿಯ ವಿರುದ್ಧ ವಿಚಾರಣೆ ಪ್ರಗತಿಯಲ್ಲಿದೆ.

ಈ) ಸದರಿ ನೌಕರರು ನಿವೃತ್ತಿ ಹೊಂದಿರುವುದರಿಂದ ವಿಚಾರಣೆ ವಿಳಂಬವಾಗುತ್ತಿದೆ.

ಸೂಳ್ಯ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಸರಬರಾಜು ಯೋಜನೆ.

1393 (1993)

ಶ್ರೀ ಎಸ್.ಅಂಗಾರ (ಸೂಳ್ಯ): ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನೀರು ಸರಬರಾಜು ಯೋಜನೆಯಡಿಯಲ್ಲಿ ಕೊರೆಯಲಾದ ಕೊಳವೆಬಾವಿಗಳ ಒಟ್ಟು ಸಂಖ್ಯೆ ಎಷ್ಟು? ಕೈಪಂಪ್‌ಗಾಗಿ ಕೊರೆಯಲಾದ ಬಾವಿಗಳ ಒಟ್ಟು ಸಂಖ್ಯೆ ಎಷ್ಟು? (ಗ್ರಾಮವಾರು ವಿವರ ನೀಡುವುದು)

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ) ಸೂಳ್ಯ ತಾಲ್ಲೂಕಿನಲ್ಲಿ 1998-99ನೇ ಸಾಲಿನಲ್ಲಿ ಗ್ರಾಮಾಣ ನೀರು ಸರಬರಾಜು ಕಾರ್ಯಕ್ರಮದಡಿ ಕೊರೆಯಲಾದ ಕೊಳವೆಬಾವಿಗಳ ಒಟ್ಟು ಸಂಖ್ಯೆ. 39. ಈ ಪೈಕಿ, ಕೈಪಂಪಿಗಾಗಿ ಕೊರೆಯಲಾದ ಕೊಳವೆಬಾವಿಗಳ ಸಂಖ್ಯೆ. 18. ಗ್ರಾಮವಾರು ವಿವರಗಳನ್ನು ಅನುಬಂಧ- 1ರಲ್ಲಿ ನೀಡಲಾಗಿದೆ.